## ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ, ಮೈಸೂರು ಜಿಲ್ಲೆ, ಮೈಸೂರು ರವರ ನಡವಳಿಗಳು

ವಿಷಯ: ಕೋವಿಡ್-19 (ಕರೋನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟುವ ಸಂಬಂಧ ಸರ್ಕಾರಿ ಮತ್ತು ಸಾರ್ವಜನಿಕ ಕಛೇರಿಗಳಲ್ಲಿ ಸಾರ್ವಜನಿಕರ ಹಾಜರಾತಿಯನ್ನು ಕಡಿಮೆಗೊಳಿಸುವ ಉದ್ದೇಶದಿಂದ ಕೆಲವು ಸೇವೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವ ಬಗ್ಗೆ.

ಉಲ್ಲೇಖ:

1. ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ಸ್ -2020ರ ಅಧಿಸೂಚನೆ ಸಂಖ್ಯೆ: ಹೆಚ್.ಎಫ್,ಡಬ್ಲ್ಯೂ,54 ಸಿ ಜಿ ಎಂ 2020 ದಿನಾಂಕ: 11.03.2020.
2. ಸರ್ಕಾರದ ಕಂದಾಯ ಇಲಾಖೆಯ ಆದೇಶ ಸಂಖ್ಯೆ: ಆರ್.ಡಿ.157 ಟಿ ಎನ್ ಆರ್ 2020, ದಿನಾಂಕ:14.03.2020

*****

**ಪ್ರಸ್ತಾವನೆ:**

ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಕೋವಿಡ್-19 ಸೋಂಕು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ಈಗಾಗಲೇ ಜಾರಿಗೊಳಿಸಿದ್ದು, ಇನ್ನೂ ಹೆಚ್ಚಿನ ರೀತಿಯಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೆತ್ತಿಗೊಳ್ಳುವ ಅಗತ್ಯತೆ ಇರುತ್ತದೆ, ಈ ಹಿನ್ನಲೆಯಲ್ಲಿ ಉಲ್ಲೇಖ(2)ರ ಆದೇಶದಂತೆ ರಾಜ್ಯದಲ್ಲಿ ಕರೂನಾ ರೋಗಾಣು ಹರಡುವ ಹಿನ್ನಲೆಯಲ್ಲಿ ಪ್ರಕೃತಿ ವಿಕೋಪ ಹಾಗೂ ಸರ್ಕಾರದಿಂದ ತುರ್ತು ಪರಿಸ್ಥಿತಿ ಘೋಷಿಸಿದ್ದು, Disaster Management Act 2005ರ ಸೆಕ್ಷನ್ 22 ಉಪಬಂಧ 2 ಹೆಚ್ ರಲ್ಲಿನ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸದರಿ ಕಾಯ್ದೆಯ ಕಲಂ 24(a),(b),(f),(h),(j),(k),(i) ರಡಿ ಜಿಲ್ಲಾ ವಿಪತ್ತು ನಿಯಂತ್ರಣಾ ಪ್ರಾಧಿಕಾರದ ಅಧ್ಯಕ್ಷರಿಗೆ (ಜಿಲ್ಲಾಧಿಕಾರಿಗಳಿಗೆ) ಅಧಿಕಾರಗಳನ್ನು ಪ್ರತ್ಯಾಯೋಜಿಸಲಾದ ರೀತ್ಯಾ ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಆದೇಶಿಸಲಾಗಿದೆ.

ಈ ಹಿನ್ನಲೆಯಲ್ಲಿ ಸಾರ್ವಜನಿಕರು ಸರ್ಕಾರದ ವಿವಿಧ ಸೇವೆಗಳನ್ನು ಪಡೆಯುವ ಉದ್ದೇಶದಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿವಿಧ ಜಿಲ್ಲಾ/ತಾಲ್ಲೂಕು/ಹೋಬಳಿ ಮಟ್ಟದ ಕಛೇರಿಗಳಿಗೆ ಭೇಟಿ ನೀಡುವುದು, ಸಾರ್ವಜನಿಕರು ಏಕ ಕಾಲದಲ್ಲಿ ಒಟ್ಟಿಗೆ ಸೇರುವಂತಹ ಸಂದರ್ಭ ಉಂಟಾಗುವುದರಿಂದ ವೈರಾಣು ಹರಡಲು ಅನುಕೂಲ ವಾತಾವರಣ ಮಾಡಿಕೊಟ್ಟಂತಾಗುತ್ತದೆ. ಇದನ್ನು ತಪ್ಪಿಸಲು ಹಾಗೂ ವೈರಾಣು ವ್ಯಕ್ತಿಯಿಂದ ವ್ಯಕ್ತಿಗೆ ಹರಡುವುದನ್ನು ತಡೆಗಟ್ಟುವ ಉದ್ದೇಶದಿಂದ ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ 2020 ಹಾಗೂ Disaster Management Act 2005ರಡಿಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

## ಆದೇಶ

MYSDC/MAG1/MLO/71(4)/2020(E-95753 ) ದಿನಾಂಕ: 19-03-2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಅಭಿರಾಮ್ ಜಿ ಶಂಕರ್, ಭಾ.ಆ.ಸೇ. ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಯಾದ ನಾನು ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ಸ್ -2020ರ ನಿಯಮ 12 ರಲ್ಲಿ ಹಾಗೂ Disaster Management Act 2005 ಕಲಂ 24(a),(b), 30(2) ರಡಿಯಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಈ ಕೆಳಕಂಡ ಸೇವೆಗಳನ್ನು ಮುಂದಿನ ಆದೇಶದವರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಆದೇಶ ಹೊರಡಿಸಿರುತ್ತೇನೆ.

I. ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಕಂದಾಯ ಇಲಾಖೆಯ ವಿವಿಧ ಸೇವೆಗಳನ್ನು ಒದಗಿಸುತ್ತಿರುವ ಅಟಲ್ ಜೀ ಜನಸ್ನೇಹಿ ಕೇಂದ್ರ, ಸ್ಪಂದನ ಕೇಂದ್ರ ಮತ್ತು ಆಧಾರ್ ಕೇಂದ್ರಗಳಲ್ಲಿ ಸಾರ್ವಜನಿಕರಿಗೆ ನೀಡಲಾಗುತ್ತಿರುವ ಸೇವೆಗಳು.

Scanned with CamScanner

II. ಆಧಾರ್ ಸೇವೆ ಒದಗಿಸುತ್ತಿರುವ ಕೇಂದ್ರಗಳಲ್ಲಿನ ಸೇವೆಗಳು.

III. ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ನೀಡಲಾಗುತ್ತಿರುವ ಹೊಸ ವಾಹನ ಚಾಲನಾ ರಹದಾರಿ, ಕಲಿಯುವವರ ಪರವಾನಿಗೆ ನೋಂದಣಿ.(ವಾಹನ ಚಾಲನಾ ಪರವಾನಿಗೆಯ ನವೀಕರಣವನ್ನು ಮಾಡಿಸಿಕೊಳ್ಳಲು ನಿರ್ಬಂಧ ಅನ್ವಯಿಸುವುದಿಲ್ಲ)

IV. ಉಪನೋಂದಣಾಧಿಕಾರಿಗಳ ಕಛೇರಿಯ ಸ್ಥಿರ ಆಸ್ತಿ ನೋಂದಣಿ ಸೇವೆಗಳು.

V. ನಗರ ಸ್ಥಳೀಯ ಸಂಸ್ಥೆಗಳು ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಗಳಲ್ಲಿ ಸಾರ್ವಜನಿಕರಿಗೆ ನೀಡಲಾಗುತ್ತಿರುವ ಸೇವೆಗಳು (ಖಾತೆ, ಸಾರ್ವಜನಿಕ ಹರಾಜುಗಳು, ಗ್ರಾಮ ಸಭೆ, ಇತರೆ ಲೈಸನ್ಸ್ ನೀಡುವಿಕೆ, ಜನನ - ಮರಣ ಪ್ರಮಾಣ ಪತ್ರಗಳನ್ನು ವಿತರಿಸುವ ಸೇವೆಗಳು)

VI. ಸಹಕಾರಿ ಸಂಘಗಳ ಉಪನಿಬಂಧಕರು ಹಾಗೂ ಸಹಕಾರ ಸಂಘಗಳ ಸಹಾಯಕ ಉಪನಿಬಂಧಕರು ಸಹಕಾರ ಇಲಾಖೆಗೆ ಸಂಬಂಧಿಸಿದಂತೆ ನೀಡಲಾಗುವ ಸೇವೆಗಳು.

VII. ಕೃಷಿ/ ತೋಟಗಾರಿಕೆ/ ಮೀನುಗಾರಿಕೆ ಇಲಾಖೆಯಲ್ಲಿನ ವಿವಿಧ ಸೇವೆಗಳು.(ರೈತ ಆತ್ಮಹತ್ಯೆ, ರೈತರ ಆಕಸ್ಮಿಕ ಮರಣಗಳು ಹಾಗೂ ಇತರೆ ತುರ್ತು ವಿಷಯಗಳನ್ನು ಹೊರತುಪಡಿಸಿದ)

VIII. ಸಮಾಜ ಕಲ್ಯಾಣ ಇಲಾಖೆ/ ಅಲ್ಪಸಂಖ್ಯಾಂತರ ಕಲ್ಯಾಣ ಇಲಾಖೆ/ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಅಧೀನದಲ್ಲಿ ಬರುವ ನಿಗಮ ಮಂಡಳಿಗಳ ಸೇವೆಗಳು.

IX. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕನ್ನಡ ಸಂಸ್ಕೃತಿ ಇಲಾಖೆಯ ಸೇವೆಗಳು.

ಈ ಮೇಲೆ ವಿವರಿಸಿದ ನಿರ್ಬಂಧಿತ ಸೇವೆಗಳ ಪಟ್ಟಿಗೆ ಹೊಸ ಸೇವೆಗಳನ್ನು ಸೇರ್ಪಡೆ ಮಾಡಲು ಅಥವಾ ಬದಲಾವಣೆ ಮಾಡಲು ಪರಿಸ್ಥಿತಿ ತೀವ್ರತೆಯ ಅನುಗುಣದವಾಗಿ ಕ್ರಮವಹಿಸಲಾಗುವುದು.

DISTRICT MAGISTRATE MYSORE DISTRICT

ಷರತ್ತುಗಳು

ಈ ಆದೇಶ ತುರ್ತು ಹಾಗೂ ದಿನನಿತ್ಯದ ಸೇವೆಗಳಿಗೆ ಅಂದರೆ ಬ್ಯಾಂಕ್, ಅಂಚೆ ಕಛೇರಿ, ಕೆ.ಎಸ್.ಆರ್.ಟಿ.ಸಿ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಸೇವೆಗಳು, ಸ್ವಚ್ಛತೆ ಕಾರ್ಯಕ್ರಮಗಳು ಕುಡಿಯುವ ನೀರು, ವಿದ್ಯುತ್ ಶಕ್ತಿ ಪೂರೈಕೆ, ಒಳಚರಂಡಿ ವ್ಯವಸ್ಥೆಗಳು, ದಿನಸಿ/ಹಣ್ಣು/ ತರಕಾರಿ/ಮಾರುಕಟ್ಟೆಗಳು, ಆಸ್ಪತ್ರೆ ಸೇವೆಗಳು, ಪಶು ಆಸ್ಪತ್ರೆಗಳು, ಔಷಧಿ ಅಂಗಡಿಗಳು, ಶವ ಸಂಸ್ಕಾರ ಇತ್ಯಾದಿ ಸೇವೆಗಳು ಹಾಗೂ ತುರ್ತು ಸೇವೆಗಳಿಗೆ ಅನ್ವಯವಾಗತಕ್ಕದಲ್ಲ.

2. ಮೇಲ್ಕಂಡ ಸೇವೆಗಳನ್ನು ತಾತ್ಕಲಿಕವಾಗಿ ನಿರ್ಭಂಧಿಸಲಾಗಿದ್ದರೂ ಸಹ ಸದರಿ ಕಛೇರಿಗಳಿಗೆ ರಜೆ ಘೋಷಣೆ ಮಾಡಿರುವುದಿಲ್ಲ ಹಾಗೂ ಸಂಬಂಧಿಸಿದ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರು ಎಂದಿನಂತೆ ಕಛೇರಿಯಲ್ಲಿ ಲಭ್ಯ ಇರತಕ್ಕದ್ದು. ಅನಧಿಕೃತ ಗೈರು ಹಾಜರಿ ಅಥವಾ ಅನಧಿಕೃತವಾಗಿ ಕಛೇರಿಯನ್ನು ತೆರಯದಿದ್ದಲ್ಲಿ ಸದರಿ ಅಧಿಕಾರಿ/ಸಿಬ್ಬಂದಿಗಳ ಮೇಲೆ ಕಾನೂನು ಕ್ರಮ ಜರುಗಿಸಲಾಗುವುದು.

3. ಮೇಲ್ಕಂಡ ಆದೇಶದ ಅನ್ವಯ ಸರ್ಕಾರದ ಸೇವೆಗಳನ್ನು ಒದಗಿಸುವ ಕಛೇರಿ / ಕೇಂದ್ರಗಳಲ್ಲಿ ಸೇವೆಗಳನ್ನು ಒದಗಿಸದ ಕಾರಣ ಯಾವುದೇ ಸರ್ಕಾರಿ / ಖಾಸಗಿ / ನಿಗಮ ಮಂಡಳಿಗಳು ಯಾವುದೇ ವ್ಯಕ್ತಿಯು ದಾಖಲಾತಿಗಳನ್ನು ಹಾಜರುಪಡಿಸದ ಕಾರಣದಿಂದ ಅಂತಹ ವ್ಯಕ್ತಿಗೆ ವ್ಯತಿರಿಕ್ತವಾಗುವ ರೀತ್ಯಾ ಯಾವುದೇ ಕ್ರಮಗಳನ್ನು ತೆಗೆದುಕೊಳ್ಳತಕ್ಕದಲ್ಲ ಹಾಗೂ ಅಂತಹ ದಾಖಲಾತಿಯನ್ನು ಹಾಜರುಪಡಿಸಲು ಸಾಕಷ್ಟು ಕಾಲಾವಕಾಶವನ್ನು ನೀಡತಕ್ಕದ್ದು.

Scanned with CamScanner

4. ಸರ್ಕಾರಿ ಕಛೇರಿಗಳಿಗೆ (ಜಿಲ್ಲಾಧಿಕಾರಿಗಳು / ಉಪವಿಭಾಗಾಧಿಕಾರಿಗಳು / ತಹಶೀಲ್ದಾರರು / ಸ್ಥಳೀಯ ಸಂಸ್ಥೆಗಳು / ಇತರ ಕಛೇರಿಗಳು ಸೇರಿದಂತೆ) ಅಥವಾ ಧಾರ್ಮಿಕ ಕೇಂದ್ರಗಳಿಗೆ ಸಾರ್ವಜನಿಕರು ಭೇಟಿ ನೀಡುವುದನ್ನು ಸಾಧ್ಯವಾದಷ್ಟು ಮಟ್ಟಿಗೆ ತಡೆಯುವುದು.

ಮೇಲ್ಕಂಡ ಸೇವೆಗಳಲ್ಲಿ ಸರ್ಕಾರ ಹಾಗೂ ಮಾನ್ಯ ನ್ಯಾಯಾಲಯಗಳಿಗೆ ಸಂಬಂಧಿಸಿದ ಪ್ರಕರಣಗಳು ಮತ್ತು ಅತೀ ತುರ್ತು ಪ್ರಕರಣಗಳಿಗೆ ವಿನಾಯಿತಿ ನೀಡಲಾಗಿದೆ.

ಮೇಲ್ಕಂಡ ಆದೇಶವನ್ನು ಪಾಲಿಸದವರ ವಿರುದ್ಧ ಕಾನೂನು ರೀತ್ಯಾ ಕ್ರಮ ತೆಗೆದುಕೊಳ್ಳಲಾಗುವುದು.

ಈ ಆದೇಶವನ್ನು ನನ್ನ ಸಹಿ ಮತ್ತು ಮೊಹರಿನೊಂದಿಗೆ ಈ ದಿನ ದಿನಾಂಕ: 19.03.2020 ರಂದು ಹೊರಡಿಸಿದೆ.

DISTRICT MAGISTRATE MYSORE DISTRICT

19/3/20

(ಅಭಿರಾಮ್ ಜಿ.ಶಂಕರ್)
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ
ಮೈಸೂರು ಜಿಲ್ಲೆ, ಮೈಸೂರು

ಪ್ರತಿಯನ್ನು:-ಕೆಳಕಂಡವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

1. ಪೋಲೀಸ್ ಆಯುಕ್ತರು, ಮೈಸೂರು ನಗರ, ಮೈಸೂರು.
2. ಪೋಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಮೈಸೂರು
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು
4. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.
5. ಉಪವಿಭಾಗಾಧಿಕಾರಿಗಳು, ಮೈಸೂರು/ಹುಣಸೂರು ಉಪವಿಭಾಗ.
6. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಮೈಸೂರು.
7. ಜಿಲ್ಲಾ ನೋಂದಣಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು
8. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಮೈಸೂರು ಪೂರ್ವ/ಪಶ್ಚಿಮ ಮತ್ತು ಹುಣಸೂರು.
9. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳು
10. ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
11. ಜಿಲ್ಲೆಯ ಎಲ್ಲಾ ಉಪನೋಂದಣಾಧಿಕಾರಿಗಳು
12. ಉಪ ನಿರ್ದೇಶಕರು, ವಾರ್ತಾ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರಿಗೆ ಕಳುಹಿಸುತ್ತಾ ದೈನಂದಿನ ಪತ್ರಿಕೆಗಳಲ್ಲಿ ಮೇಲ್ಕಂಡ ವಿಷಯವನ್ನು ಸುದ್ದಿರೂಪದಲ್ಲಿ ಪ್ರಕಟಿಸಲು ಕೋರಿದೆ.
13. ನಿಲಯ ನಿರ್ದೇಶಕರು, ಆಕಾಶವಾಣಿ, ಯಾದವಗಿರಿ, ಮೈಸೂರು ಇವರಿಗೆ ಮಾಹಿತಿಗೆ ಮತ್ತು ನಿಲಯದ ಮೂಲಕ ವಿಷಯ ಪ್ರಕಟಿಸುವ ಸಲುವಾಗಿ.

Scanned with CamScanner